1552(2171) ಶ್ರೀ ಬಸವರಾಜ್ ರಾಯರೆಡ್ಡಿ (ಯಲ್‌ಬುರ್ಗ) ಸಣ್ಣ ಉಳಿತಾಯ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ರಾಜ್ಯದಲ್ಲಿ ಒಂದಂಕಿ ಲಾಟರಿಯನ್ನು ಸಂಪೂರ್ಣವಾಗಿ ನಿಲ್ಲಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಏನಾದರೂ ಇದೆಯೇ?

ಆ. ಹಾಗಿದ್ದಲ್ಲಿ, ಯಾವ ವರ್ಷದಿಂದ ನಿಲ್ಲಿಸಲಾಗುವುದು?

ಇ. ಒಂದಂಕಿ ಲಾಟರಿಯನ್ನು ಅಧಿಕೃತವಾಗಿ ಮಾರಾಟ ಮಾಡಲು ಅನುಮತಿ ನೀಡಲಾಗಿರುವ ಏಜೆನ್ಸಿಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ಏಜೆನ್ಸಿಗಳ ವಿವರ ನೀಡುವುದು)

ಈ. ಒಂದಂಕಿ ಲಾಟರಿ ಅಂಗಡಿಗಳು ಶಾಲೆಯು, ಸರ್ಕಾರಿ ಕಛೇರಿಗಳ ಬಳಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಉ. ಹಾಗಿದ್ದಲ್ಲಿ, ಇದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮವೇನು?

ಶ್ರೀ ಬಸವರಾಜ್ ಎಸ್. ಹೊರಟ್ಟಿ (ಮಾನ್ಯ ಸಣ್ಣ ಉಳಿತಾಯ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು) :

ಅ. ಲಾಟರಿ ರೆಗ್ಯುಲೇಷನ್ ಆಕ್ಟ್ 98ರಲ್ಲಿ ರಾಷ್ಟ್ರಾದ್ಯಂತ ಒಂದಂಕಿ ಲಾಟರಿಯನ್ನು ನಿಷೇಧಿಸಲಾಗಿದೆ. ಆದ್ದರಿಂದ ರಾಜ್ಯದಲ್ಲಿ ಒಂದಂಕಿ ಲಾಟರಿಯನ್ನು ಪ್ರತ್ಯೇಕವಾಗಿ ನಿಷೇಧಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಆ. ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಇ. ಒಂದಂಕಿ ಲಾಟರಿ ಮಾರಾಟ, ಲಾಟರಿ ರೆಗ್ಯುಲೇಷನ್ ಆಕ್ಟ್ 98ರಲ್ಲಿ ನಿಷೇದಿಸ ಲಾಗಿರುವುದರಿಂದ ಒಂದಂಕಿ ಲಾಟರಿ ಮಾರಾಟಕ್ಕೆ ರಾಜ್ಯದಲ್ಲಿ ಅಧಿಕೃತವಾಗಿ ಏಜನ್ಸಿ ನೀಡಿರುವುದಿಲ್ಲ.

ಈ. ಇಲ್ಲ.

ಉ. ಈ ಪ್ರಶ್ನೆ ಉದ್ಭವಿಸುವುದಿಲ್ಲ.

1553 (2172) ಶ್ರೀ ಬಸವರಾಜ್ ರಾಯರೆಡ್ಡಿ (ಯಲ್‌ಬುರ್ಗ) ಮಾನ್ಯ ಮುಖ್ಯ ಮಂತ್ರಿಯವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ. 2002–03, 2003–04, 2004–05ನೇ ಸಾಲಿನಲ್ಲಿ ರಾಜ್ಯದಲ್ಲಿ ಆದ ರಸ್ತೆ ಅಪಘಾತಗಳ ಸಂಖ್ಯೆ ಎಷ್ಟು ಹಾಗೂ ಮೃತಪಟ್ಟವರ ಸಂಖ್ಯೆ ಎಷ್ಟು (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

ಆ. ಬೆಂಗಳೂರು ಮಹಾನಗರದಲ್ಲಿ 2002 ರಿಂದ 2005ರ ವರೆಗೆ ಪ್ರತಿ ವರ್ಷ ಸಂಭವಿಸಿರುವ ವಾಹನಗಳ ಅಪಘಾತಗಳೆಷ್ಟು :

ಇ. ಈ ಪೈಕಿ ಮೃತಪಟ್ಟವರು ಹಾಗೂ ಗಾಯಗೊಂಡವರ ಸಂಖ್ಯೆ ಎಷ್ಟು :

ಈ. ಬೆಂಗಳೂರು ಮಹಾನಗರದಲ್ಲಿ ರಸ್ತೆ ಅಪಘಾತಗಳನ್ನು ತಡೆಯಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ :

ಉ. ಈ ಅಪಘಾತದಲ್ಲಿ ಮೃತಪಟ್ಟವರಿಗೆ ಹಾಗೂ ಗಾಯಗೊಂಡವರಿಗೆ ನೀಡಿರುವ ಪರಿಹಾರ ಧನವೆಷ್ಟು ?